**<u>ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಡಾಧಿಕಾರಿಗಳ ನ್ಯಾಯಾಲಯ, ಹೆಚ್.ಡಿ.ಕೋಟೆ</u>**

**<u>ಸಿ.ಸಿ. ನಂ.324/2017</u>**

**ಸಿ.ಡಬ್ಲ್ಯೂ- 2 ಪಿ.ಡಬ್ಲ್ಯೂ- 2**

| | | |
|---|---|---|
| ಸಾಕ್ಷಿದಾರರ ಹೆಸರು | : | ರಾಜೇಶ್ |
| ತಂದೆಯ/ ಗಂಡನ ಹೆಸರು | : | ಚಿಕ್ಕಮಾಲೇಗೌಡ |
| ವಯಸ್ಸು | : | 32 ವರ್ಷ |
| ಉದ್ಯೋಗ | : | ಪೊಲೀಸ್ ಪೇದೆ |
| ವಾಸ ಸ್ಥಳ | : | ಮೈಸೂರು |

**<u>ದಿನಾಂಕ 17.06.2025 ರಂದು ಸಾಕ್ಷಿಗೆ ಪ್ರಮಾಣ ಭೋಧಿಸಲಾಯಿತು.</u>**

**<u>ಮುಖ್ಯ ವಿಚಾರಣೆ:- ಸಹಾಯಕ ಸರ್ಕಾರಿ ಅಭಿಯೋಜಕರಿಂದಃ</u>**

ನಾನು 2016 ರಿಂದ 2017 ರವರೆಗೆ ಹೆಚ್ ಡಿ ಕೋಟೆ ಪೋಲೀಸ್ ಠಾಣೆಯಲ್ಲಿ ಪೊಲೀಸ್ ಪೇದೆ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕಃ 01.10.2016 ರಂದು ಸಂಜೆ 7.30 ರ ಸಮಯದಲ್ಲಿ ನಾನು, ಚಾಸಾ2 ರಿಂದ 6 ರವರು ಚಾಸಾ1 ರವರ ಜೊತೆ ಸೋಗಳ್ಳಿ ಗ್ರಾಮಕ್ಕೆ ಗಸ್ತಿಗೆ ಹೋಗಿದ್ದೆವು. ಅಲ್ಲಿಂದ ಅಂತರಸಂತೆ ಔಟ್ ಪೋಸ್ಟ್ ಎದುರುಗಡೆ ವಾಹನಗಳನ್ನು ಪರಿಶೀಲಿಸುತ್ತಿರುವಾಗ ಅಂತರಸಂತೆ ಕಡೆಯಿಂದ ಬಾವಲಿ ಕಡೆಗೆ ಹೋಗುತ್ತಿದ್ದ ಮಾರುತಿ ಕಾರ್ ನಂ ಕೆಎ 09 ಎನ್ 1782 ನ್ನು ತಡೆದು ಪರಿಶೀಲನೆ ಮಾಡಿದಾಗ ಕಾರಿನ ಹಿಂಭಾಗದ ಸೀಟ್ ನಲ್ಲಿ ಒಂದು ರಟ್ಟಿನ ಬಾಕ್ಸ್ ಇದ್ದು, ಅದನ್ನು ತೆರೆದು ನೋಡಲಾಗಿ 90 ಎಂ.ಎಲ್ ನ 68 ಒರಿಜಿನಲ್ ಚಾಯ್ಸ್ ಡೀಲಕ್ಸ್ ವಿಸ್ಕಿಯ ಪೌಚುಗಳು

ಇದ್ದವು. ಕಾರ್ ಚಾಲಕನನ್ನು ವಿಚಾರಿಸಲಾಗಿ ರಾಮಸ್ವಾಮಿ ಬಿನ್ ಸಿದ್ದೇಗೌಡ ಎಂದು ತಿಳಿಸಿರುತ್ತಾನೆ. ನಂತರ ಆರೋಪಿಯು ಕಾರನ್ನು ಅಲ್ಲೇ ಬಿಟ್ಟು ಓಡಿ ಹೋಗಿರುತ್ತಾನೆ. ಹುಡುಕಿದರೂ ಸಿಕ್ಕಿರುವುದಿಲ್ಲ. ಅಲ್ಲೇ ರಸ್ತೆಯಲ್ಲಿ ಹೋಗುತ್ತಿದ್ದ ಚಾಸಾ7 ಮತ್ತು 8 ರವರನ್ನು ಪಂಚರಾಗಿ ಸಹಕರಿಸಲು ಕೇಳಿದ್ದಾಗಿ ಅವರು ಒಪ್ಪಿದ್ದು, ಅವರ ಸಮಕ್ಷಮ ಮಹಜರ್ ಕ್ರಮವನ್ನು ಜರುಗಿಸಿ ಕಾರು ಮತ್ತು ಮದ್ಯದ ಪೌಚುಗಳನ್ನು ಅಮಾನತ್ತುಪಡಿಸಿಕೊಂಡಿರುತ್ತೇವೆ. ರಾಸಾಯನಿಕ ಪರೀಕ್ಷೆಗೆ ಕಳುಹಿಸಲು ಎರಡು ಪೌಚುಗಳನ್ನು ಪ್ರತ್ಯೇಕವಾಗಿ ತೆಗೆದು ಬಿಳಿ ಬಟ್ಟೆಯಿಂದ ಸುತ್ತಿ ಎನ್ ಎಂಬ ಅಕ್ಷರದಿಂದ ಸೀಲ್ ಮಾಡಿರುತ್ತೇವೆ. ಆರೋಪಿಯನ್ನು ನೋಡಿ ಸಾಕ್ಷಿಯು ಗುರುತಿಸಿರುತ್ತಾರೆ. ನ್ಯಾಯಾಲಯದ ಮುಂದೆ ಹಾಜರುಪಡಿಸಿರುವ ಮುದ್ದೆ ಮಾಲನ್ನು ಸಾಕ್ಷಿಯು ನೋಡಿ ಗುರುತಿಸಿರುತ್ತಾರೆ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದಃ**

ಬೀಚನಹಳ್ಳಿ ಉಪ ಠಾಣೆಯಲ್ಲಿ ಒಬ್ಬ ಪೊಲೀಸರನ್ನು ನೇಮಕ ಮಾಡಲಾಗಿರುತ್ತದೆ ಎಂದರೆ ಸರಿ . ತಪಾಸಣೆ ಮಾಡಲು ಹೋಗಿದ್ದ ಸ್ಥಳ ಸಾರ್ವಜನಿಕರು ಓಡಾಡುವ ಸ್ಥಳ ಎಂದರೆ ಸರಿ . ಚಾಸಾ7 ಮತ್ತು 8 ರವರು ಮಚ್ಚರೆ ಮತ್ತು ಹೊಸಮಾಳ ಗ್ರಾಮದವರು ಎಂದರೆ ಸರಿ . ಚಾಸಾ7 ಮತ್ತು 8 ರವರ ಸಮಕ್ಷಮ ಯಾವುದೇ ಮುದ್ದೆ ಮಾಲುಗಳನ್ನು ಅಮಾನತ್ತುಪಡಿಸಿಕೊಂಡಿಲ್ಲ ಎಂದರೆ ಸರಿಯಲ್ಲ. ಆರೋಪಿಗೂ ಮುದ್ದೆ ಮಾಲುಗಳಿಗೂ ಯಾವುದೇ ಸಂಬಂಧ ಇಲ್ಲ ಎಂದರೆ ಸರಿಯಲ್ಲ. ಸದರಿ ದಿನ ಆರೋಪಿ ಕಾರನ್ನು ಚಲಾಯಿಸುತ್ತಿರಲಿಲ್ಲ ಎಂದರೆ ಸರಿಯಲ್ಲ. ಘಟನಾ ಸ್ಥಳಕ್ಕೂ ಬೀಚನಹಳ್ಳಿ ಪೊಲೀಸ್ ಠಾಣೆಗೂ ಎಷ್ಟು ಅಂತರವಿರುತ್ತದೆ ಎಂದು ನೆನಪಿಲ್ಲ. ಆರೋಪಿಯ ವಿರುದ್ಧ ಸುಳ್ಳು ಪ್ರಕರಣ ದಾಖಲು ಮಾಡಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಸ್ಥಳದಲ್ಲಿ ಯಾವುದೇ ಮಹಜರ್ ಮಾಡಿಲ್ಲ, ಮೇಲಾಧಿಕಾರಿಗಳಿಗೆ ಸಹಾಯ ಮಾಡಲು ಸುಳ್ಳು ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಗಣಕೀಕರಣಗೊಳಿಸಲಾಯಿತು).

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ.ದ.ನ್ಯಾ ದಂಡಾಧಿಕಾರಿಗಳು, ಹೆಚ್.ಡಿ.ಕೋಟೆ.**